**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಹರೀಶ್ ಕುಮಾರ್ ಇವರು**
**ನಿಯಮ- 72ರಡಿ ಸೂಚನೆಗೆ ಹೇಳಿಕೆ**

**ಸೂಚನೆ**

ರಾಜ್ಯದಲ್ಲಿ ಆಡಳಿತ ವ್ಯವಸ್ಥೆಯನ್ನು ವಿಕೇಂದ್ರೀಕರಣಗೊಳಿಸಿ ಜನಸಾಮಾನ್ಯರನ್ನು ಸಶಕ್ತಿಕರಣಗೊಳಿಸಬೇಕು ಎಂಬುದು ಪ್ರಜಾಪ್ರಭುತ್ವದ ಸದಾಶಯವಾಗಿದ್ದು, ಕರಾವಳಿ ಭಾಗದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆಯಾಗಬೇಕೆನ್ನುವುದು ಬಹು ವರ್ಷಗಳ ಬಹು ಜನರ ಆಶಯವಾಗಿರುತ್ತದೆ. ಆದರೆ, ಹೈಕೋರ್ಟ್ ಪೀಠ ಕರಾವಳಿ ಭಾಗಕ್ಕೆ ಮರೀಚಿಕೆಯಾಗಿದೆ. ಬಾಕಿ ಉಳಿದಿರುವ ಸಾವಿರಾರು ಪ್ರಕರಣಗಳ ಇತ್ಯರ್ಥಕ್ಕೆ ಹತ್ತಾರು ವರ್ಷಗಳ ಸಮಯ, ಹಣ ವ್ಯಯವಾಗುವುದನ್ನು ತಪ್ಪಿಸುವ ಸಲುವಾಗಿ ರಾಜ್ಯ ಹೈಕೋರ್ಟ್ ಪ್ರಧಾನ ಕಛೇರಿಯ ಜೊತೆಗೆ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುತ್ತಿರುವ ಧಾರವಾಡ ಮತ್ತು ಕಲಬುರಗಿ ವಿಭಾಗೀಯ ಪೀಠಗಳ ಮಾದರಿಯಲ್ಲಿ ಕರಾವಳಿ ಜಿಲ್ಲೆಯ ಸುತ್ತಮುತ್ತಲಿನ ಪಂಚ ಜಿಲ್ಲೆಗಳಿಗೆ ಅನುಕೂಲವಾಗುವಂತೆ ವಿಭಾಗೀಯ ಹೈಕೋರ್ಟ್ ಪೀಠವನ್ನು ಸ್ಥಾಪನೆ ಮಾಡಲು ಕ್ರಮ ಕೈಗೊಳ್ಳುವಂತೆ ನಿಯಮ 72ರ ಅಡಿಯಲ್ಲಿ ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನಸೆಳೆಯಬಯಸುತ್ತೇನೆ.

**ಹೇಳಿಕೆ**

ಕರಾವಳಿ ವಿಭಾಗೀಯ ಹೈಕೋರ್ಟ್ ಪೀಠ ಸ್ಥಾಪಿಸುವ ಬಗ್ಗೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಯಾವುದೇ ಪ್ರಸ್ತಾವನೆ ಸರ್ಕಾರದಲ್ಲಿ ಇರುವುದಿಲ್ಲ.

**ಸಂಖ್ಯೆ:** ಸಿಆಸುಇ 59 ಎಸ್‌ಹೆಚ್‌ಸಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

C 87